ಅಭಿಯಾಚನೆ ಕ್ರಮಾಂಕ 28 – ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2010 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 2,364.58 ಲಕ್ಷ ರೂ. ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನವಾಗಿ ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಪೂರಕ ಅನುದಾನ ಬೇಡಿಕೆಗಳು 2008–09
ಪೂರಕ ಅಂದಾಜುಗಳು(2ನೇ ಕುರಿತು)

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಯವರು) : ಮಾನ್ಯ ಅಧ್ಯಕ್ಷರೆ, ದಿನಾಂಕ 31–03–2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1 ರಿಂದ 5, 7 ರಿಂದ 14 ಮತ್ತು 17 ರಿಂದ 28 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗನ್ನೂ ಸೇರಿ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತವನ್ನು ಈ ಸಭೆ ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ನಾನು ಈಗ ಬೇಡಿಕೆಗಳನ್ನು ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ,

"ದಿನಾಂಕ 31–03–2009ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1 ರಿಂದ 5, 7 ರಿಂದ 14 ಮತ್ತು 17 ರಿಂದ 28 ಇವುಗಳಿಗೆ ಸಂಬಂಧಿಸಿದಂತೆ ಸಂದಾಯವಾಗುವ ವೆಚ್ಚವನ್ನು ಭರಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಹಾಗೂ ಬಂಡವಾಳ ಖಾತೆಯಲ್ಲಿ ಮಂಜೂರು ಮಾಡಿದ ಮೊಬಲಗನ್ನೂ ಸೇರಿ ಬೇಡಿಕೆಗಳ ಪಟ್ಟಿಯಲ್ಲಿ ನಮೂದಿಸಿದ ಮೊಬಲಗಿಗೆ ಮೀರದ ಮೊತ್ತವನ್ನು ಈ ಸಭೆ ಮಂಜೂರು ಮಾಡುವುದು."

LA.V.S.F./14

ಪ್ರಸ್ತಾವವನ್ನು ಅಂಗೀಕರಿಸಲಾಯಿತು ಮತ್ತು ಬೇಡಿಕೆಗಳನ್ನು ಮಂಜೂರು ಮಾಡಲಾಯಿತು.

(ಮಾನ್ಯ ಅಧ್ಯಕ್ಷರ ಆದೇಶದಂತೆ ಮಂಜೂರಾದ ಬೇಡಿಕೆಗಳನ್ನು ಕೆಳಗೆ ನಮೂದಿಸಲಾಗಿದೆ)

<u>ಮುಖ್ಯಮಂತ್ರಿ ಮತ್ತು ಹಣಕಾಸು ಸಚಿವರು</u>

1. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕೃಷಿ ಮತ್ತು ತೋಟಗಾರಿಕೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **4439.81** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

2. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಪಶುಸಂಗೋಪನೆ ಮತ್ತು ಮೀನುಗಾರಿಕೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **1619.25** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

3. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಆರ್ಥಿಕ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **201545.00** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **22540.52** ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

4. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಸಿ.ಆ.ಸು.ಇ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **2245.50** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

5. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಒಳಾಡಳಿತ ಮತ್ತು ಸಾರಿಗೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **346.33** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **500.00** ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

6. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ

ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **8787.35** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **28602.25** ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

7. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಅರಣ್ಯ, ಜೀವಿ ಶಾಸ್ತ್ರ ಮತ್ತು ಪರಿಸರ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **1188.28** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **50.00** ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

8. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಸಹಕಾರ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **378.61** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **1431.00** ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

9. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಸಮಾಜ ಕಲ್ಯಾಣ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **2753.58** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

10. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **10008.94** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

11. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **1769.80** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **3399.93** ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

12. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಆಹಾರ ಮತ್ತು ನಾಗರೀಕ ಸರಬರಾಜು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **10188.50** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

13. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕಂದಾಯ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **55.034.41** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **600.00** ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

14. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಶಿಕ್ಷಣ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **12714.55** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **370.00** ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

15. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ವಾಣಿಜ್ಯ ಮತ್ತು ಕೈಗಾರಿಕೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **5598.05** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **1307.15** ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

16. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ನಗರಾಭಿವೃದ್ಧಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **579.00** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

17. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಲೋಕೋಪಯೋಗಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **13616.85** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ

106727.56 ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

18. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಜಲಸಂಪನ್ಮೂಲ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **269.56** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **5668.00** ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

19. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **666.44** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **0.02** ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

20. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕಾರ್ಮಿಕ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **1483.70** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **300.00** ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

21. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ, **'ಇಂಧನ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **135.51** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **100000.00** ಲಕ್ಷ ರೂ ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

22. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕನ್ನಡ ಮತ್ತು ಸಂಸ್ಕೃತಿ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **1353.72** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

23. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **10253.70** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

24. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಕಾನೂನು'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **438.00** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

25. 2009ನೇ ಮಾರ್ಚ್ 31 ರ ಅಂತ್ಯದೊಳಗಾಗಿ **'ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **148.16** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.

4. ಶಾಸನ ರಚನೆ

(i) ವಿಧೇಯಕಗಳ ಮಂಡನೆ :

ಅ) ಕರ್ನಾಟಕ ಧನವಿನಿಯೋಗ ವಿಧೇಯಕ, 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಯವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

" 2009ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಯವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.